16K

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:--** ಬೀದರ್ ಜಿಲ್ಲೆಯ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಲಾಗಿರುವ 4 ಸರಣಿ ಬ್ಯಾರೇಜುಗಳ ಉಸ್ತುವಾರಿಯನ್ನು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಹಸ್ತಾಂತರಿಸುವ ಕುರಿತು.

****

ಓದಲಾಗಿದೆ:- ಪತ್ರಸಂಖ್ಯೆ:ವ್ಯನಿ/ಕೃಭಾಜನಿನಿ/121-ನಿರ್ದೇಶಕರ ಮಂಡಳಿ/ತಾಂತ್ರಿಕ/2019-20/1500 ದಿನಾಂಕ:23/07/2019.

ಪ್ರಸ್ತಾವನೆ:-

ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಮೇಲೆ ಓದಲಾದ ಪತ್ರದಲ್ಲಿ ಸರ್ಕಾರದ ಆದೇಶ ದಿನಾಂಕ:08/08/2003 ರಂತೆ ಬೀದರ್ ಜಿಲ್ಲೆಯ ಭಾಲ್ಕಿ ಮತ್ತು ಔರಾದ ತಾಲ್ಲೂಕುಗಳಲ್ಲಿ ಗೋದಾವರಿ ಕಣಿವೆಯ ಮಾಂಜ್ರಾ ನದಿ ಪಾತ್ರದಡಿ 4.80 ಟಿ.ಎಂ.ಸಿ. ನೀರಿನ ಬಳಕೆಗಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ಈ ಕೆಳಕಂಡಂತೆ 4 ಸರಣಿ ಬ್ರಿಡ್ಜ್ ಕಂ ಬ್ಯಾರೇಜುಗಳನ್ನು ನಿರ್ಮಾಣಗೊಳಿಸಲಾಗಿರುತ್ತದೆ.

| ಕ್ರ ಸಂ. | ಯೋಜನೆಯ ಹೆಸರು | ನೀರಿನ ಬಳಕೆ (ಟಿ.ಎಂ.ಸಿ) | ಇದುವರೆಗೂ ಖರ್ಚು ಮಾಡಲಾದ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|
| 1 | ಜೀರಗಿಹಾಳ ಬ್ರಿಡ್ಜ್ ಕಂ ಬ್ಯಾರೇಜ್ | 0.78 | 63.22 |
| 2 | ಮಾಣಿಕೇಶ್ವರ ಬ್ರಿಡ್ಜ್ ಕಂ ಬ್ಯಾರೇಜ್ | 0.78 | 57.47 |
| 3 | ಹಾಲಹಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ | 2.46 | 104.14 |
| 4 | ಚಂದಾಪುರ ಬ್ರಿಡ್ಜ್ ಕಂ ಬ್ಯಾರೇಜ್ | 0.78 | 60.94 |
| | **ಒಟ್ಟು** | **4.80** | **285.87** |

ಪ್ರಸಕ್ತ 2019ನೇ ಸಾಲಿನಲ್ಲಿ ಬ್ಯಾರೇಜುಗಳಡಿ ನೀರನ್ನು ಶೇಖರಿಸಿ ನೀರಾವರಿ ಮತ್ತು ಕುಡಿಯುವ ನೀರಿನ ಸಲುವಾಗಿ ಬಳಸಲು ಯೋಜಿಸಲಾಗಿರುತ್ತದೆ. ಮುಂದುವರೆದು, ಸದರಿ ಬ್ರಿಡ್ಜ್ ಕಂ ಬ್ಯಾರೇಜುಗಳಡಿ ಶೇಖರಣೆಯಾಗುವ ಹಿನ್ನೀರನ್ನು ರೈತರು ತಮ್ಮ ಸ್ವಂತ ಪಂಪ್‌ಸೆಟ್ ಅಳವಡಿಸಿಕೊಂಡು ನೀರಾವರಿಗೆ ಬಳಸಿಕೊಳ್ಳುವುದಾಗಿರುತ್ತದೆ.

ಸರ್ಕಾರವು 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾಂಜ್ರಾ ನದಿ ಪಾತ್ರದಡಿ ಬೀದರ್ ನಗರ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಮಾಂಜ್ರಾ ನದಿಯಿಂದ ನೀರು ತುಂಬಿಸುವ ಯೋಜನೆ ಮತ್ತು ಕಾರಂಜಾ ಯೋಜನೆಯ ಎಡದಂಡೆ ಮತ್ತು ಬಲದಂಡೆ ಕಾಲುವೆಗಳ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಘೋಷಿಸಿದ್ದು, ಸದರಿ ಹೊಸ ಯೋಜನೆಗಳ ಅನುಷ್ಠಾನವು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಒಳಪಟ್ಟಿರುತ್ತದೆ

ಕರ್ನಾಟಕ ನೀರಾವರಿ ನಿಗಮದ ಕೋರಿಕೆ ಮೇರೆಗೆ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಿರುವ 4 ಸರಣಿ ಬ್ಯಾರೇಜ್‌ಗಳ ಉಸ್ತುವಾರಿಯನ್ನು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಹಸ್ತಾಂತರಿಸಲು ಪರಿಗಣಿಸಲಾಗಿದ್ದು, ಸದರಿ ಪ್ರಸ್ತಾವನೆಯನ್ನು ದಿನಾಂಕ:09.07.2019 ರಂದು ಜರುಗಿದ ಕೃಷ್ಣಾ ಭಾಗ್ಯ ಜಲ ನಿಗಮದ ನಿರ್ದೇಶಕರ ಮಂಡಳಿಯ 121ನೇ ಸಭೆಯಲ್ಲಿ ಚರ್ಚಿಸಲ್ಪಟ್ಟಿದ್ದು, ಮಂಡಳಿಯು ಈ ಕೆಳಕಂಡ ಅಂಶಗಳಿಗೆ ಅನುಮೋದನೆ ನೀಡಿರುತ್ತದೆ.

ಹೊರಡಿಸಿದೆ
ದಿನಾಂಕ: 1/8/19

1. ಬೀದರ್ ಜಿಲ್ಲೆಯ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಿರುವ 4 ಸರಣಿ ಬ್ಯಾರೇಜ್‌ಗಳ ಉಸ್ತುವಾರಿಯನ್ನು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಹಸ್ತಾಂತರಿಸುವ ಪ್ರಸ್ತಾವನೆಯನ್ನು ಸರ್ಕಾರದ ಅನುಮೋದನೆ ಕೋರಿ ಸಲ್ಲಿಸುವುದು.
2. 4 ಸರಣಿ ಬ್ರಿಡ್ಜ್ ಕಂ ಬ್ಯಾರೇಜುಗಳ (Low Level Friction Damping Arrangement, Jet splitting arrangements & Hydraulic Cylinders ಅಳವಡಿಕೆಯ ಕಾಮಗಾರಿಯ ವೆಚ್ಚ ಸೇರಿದಂತೆ) ನಿವ್ವಳ ವೆಚ್ಚವನ್ನು ಕರ್ನಾಟಕ ನೀರಾವರಿ ನಿಗಮವು ಭರಿಸುವುದಕ್ಕೆ ಮತ್ತು ನಿಗಮದ ಲೆಕ್ಕ ಪುಸ್ತಕಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

ನಿಗಮದ ನಿರ್ದೇಶಕರ ಮಂಡಳಿಯ ನಿರ್ಣಯದಂತೆ, ಬೀದರ್ ಜಿಲ್ಲೆಯ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಿರುವ 4 ಸರಣಿ ಬ್ರಿಡ್ಜ್ ಕಂ ಬ್ಯಾರೇಜ್‌ಗಳ ಉಸ್ತುವಾರಿಯನ್ನು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಹಸ್ತಾಂತರಿಸುವ ಕುರಿತು ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಅದರಂತೆ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಇ-ಜಸಂಇ 16 ಕೆಬಿಎನ್ 2019, ಬೆಂಗಳೂರು, ದಿನಾಂಕ:01/10/2019.</u>**

ಬೀದರ್ ಜಿಲ್ಲೆಯ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಿರುವ (1) ಜೀರಗಿಹಾಳ ಬ್ರಿಡ್ಜ್ ಕಂ ಬ್ಯಾರೇಜ್, (2) ಮಾಣಿಕೇಶ್ವರ ಬ್ರಿಡ್ಜ್ ಕಂ ಬ್ಯಾರೇಜ್ (3) ಹಾಲಹಳ್ಳಿ ಬ್ರಿಡ್ಜ್ ಕಂ ಬ್ಯಾರೇಜ್ ಹಾಗೂ (4) ಚಂದಾಪುರ ಬ್ರಿಡ್ಜ್ ಕಂ ಬ್ಯಾರೇಜ್ ಗಳ (Low Level Friction Damping Arrangement, Jet splitting arrangements & Hydraulic Cylinders ಅಳವಡಿಕೆಯ ಕಾಮಗಾರಿಯ ವೆಚ್ಚ ಸೇರಿದಂತೆ) ನಿವ್ವಳ ವೆಚ್ಚವನ್ನು ಭರಿಸುವುದಕ್ಕೆ ಮತ್ತು ನಿಗಮದ ಲೆಕ್ಕ ಪುಸ್ತಕಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೊಳಪಟ್ಟು ಸರಣಿ ಬ್ಯಾರೇಜುಗಳ ಉಸ್ತುವಾರಿಯನ್ನು ಕರ್ನಾಟಕ ನೀರಾವರಿ ನಿಗಮದ ವ್ಯಾಪ್ತಿಗೆ ಹಸ್ತಾಂತರಿಸಿ ಆದೇಶಿಸಿದೆ.

01/10/19

( ಬಿ. ಹರಿನಾರಾಯಣ )
[illegible] ಅಧೀನ [illegible] (ತಾಂತ್ರಿಕ-5)
ಜಲಸಂಪನ್ಮೂಲ ಇಲಾಖೆ
ಕೊಠಡಿ ಸಂಖ್ಯೆ 316, 3ನೇ ಮಹಡಿ
ವಿಕಾಸಸೌಧ, ಬೆಂಗಳೂರು - 560 001

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

01/10/19

(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು, (ಎ & ಇ)/(ಇ&ಆರ್‌ಎಸ್‌ಎ)/(ಜಿ&ಎಸ್‌ಎಸ್‌ಎ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
5. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
6. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರು,
7. ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಲೋ.ಇ-ಆ.ಕೋ), ವಿಧಾನ ಸೌಧ.
8. ಸರ್ಕಾರದ ಉಪ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರು.
9. ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)/(ಸೇವೆಗಳು-ಎ), ಜಲ ಸಂಪನ್ಮೂಲ ಇಲಾಖೆ.
10. ಶಾಖಾ ರಕ್ಷಕ ಕಡತ/ ಹೆಚ್ಚಿನ ಪ್ರತಿಗಳು.

3/10/19 3/10/19 3/10/19 3/X/19 3/X/19